ದಿನಾಂಕ : 13.07.2023

ಅಸಲು ದಾವೆ: 48/2015 ಪಿ.ಡಬ್ಲ್ಯೂ: 1

<u>ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**ಮುಂದುವರೆದ ಪಾಟೀ ಸವಾಲು : 1, 4, 5, 8, 9, 11 ನೇ ಪ್ರತಿವಾದಿ ಪರ ವಕೀಲರಾದ ಶ್ರೀ ಎ.ಎಸ್ ರವರಿಂದ :**

ಬೆಂಗಳೂರಿನ ರಾಷ್ಟ್ರೀಯ ಕ್ಷಯ ರೋಗ ನಿವಾರಣ ಸಂಸ್ಥೆಯಲ್ಲಿ ನಾನು ಕರ್ತವ್ಯ ನಿರ್ವಹಿಸಿರುತ್ತೇನೆ. ನನ್ನ ಜನ್ಮ ದಿನಾಂಕಕ್ಕೆ ಸಂಬಂಧಪಟ್ಟಂತೆ ದಾಖಲೆ ಹಾಜರು ಮಾಡಿರುವುದಿಲ್ಲ ಎಂದರೆ ಸರಿ. ನಿಪಿ.20 ರಲ್ಲಿ ಕಾಣುವ ಶಶಿರೇಖಾ 1 ನೇ ಪ್ರತಿವಾದಿಯ ಮಗಳು ಎಂದರೆ ಸರಿ. ಶಶಿರೇಖಾ ಅವರ ತಂದೆಯಿಂದ ಸದರಿ ಆಸ್ತಿಯನ್ನು ಖರೀದಿ ಮಾಡಿರುತ್ತಾರೆ ಎಂದರೆ ಸರಿ. ಉಳಿಕೆ ಆಸ್ತಿ 1 ನೇ ಪ್ರತಿವಾದಿ ಅವರ ಹೆಸರನಲ್ಲಿ ಇದೆ ಎಂದರೆ ಸಾಕ್ಷಿಯು ದಾವೆ ಚಾಲ್ತಿಯಲ್ಲಿ ಇದ್ದಾಗ ಕೆ.ರಾಮಶೆಟ್ಟಿ ತೀರಿಕೊಂಡ ನಂತರ 1 ನೇ ಪ್ರತಿವಾದಿ ಹೆಸರಿಗೆ ಎಲ್ಲಾ ದಾಖಲೆಗಳನ್ನು ಮಾಡಿಕೊಂಡಿರುತ್ತಾರೆ ಎಂದು ಹೇಳುತ್ತಾರೆ. ನಿಶಾನೆ.ಪಿ.20 ರಲ್ಲಿ ಕಾಣುವ ಆಸ್ತಿ ರಾಮಶೆಟ್ಟಿ ನನ್ನ ತಂದೆಯಿಂದ ಖರೀದಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ದಾವೆ ಸಲ್ಲಿಸಿದ ನಂತರ ಎ.ಸಿ. ನ್ಯಾಯಾಲಯದಲ್ಲೂ ನಾನು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸಾಕ್ಷಿಯು ಅದು ಈ ಕೇಸಿಗೆ ಸಂಬಂಧಪಟ್ಟಿರುವುದಿಲ್ಲ ಎಂದು ನುಡಿಯುತ್ತಾರೆ. ಹಳೆ ದಾಖಲಾತಿಗಳನ್ನು ಹಾಜರು ಮಾಡಿ ಎಲ್ಲರ ವಿರುದ್ಧ ದಾವೆ ಹೂಡುವ ಅಭ್ಯಾಸ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ನನಗೆ ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಇಲ್ಲದೇಇದ್ದರೂ ಕೂಡ ಸುಳ್ಳು ದಾವೆ ಸಲ್ಲಿಸಿ , ಸುಳ್ಳು ಪ್ರಮಾಣ ಪತ್ರ ಸಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಉಳಿದ ಪ್ರತಿವಾದಿಗಳ ಪರ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲನ್ನು ಮುಂದೂಡಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮದ್ದೂರು.